# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಆರ್.ಬಿ. ತಿಮ್ಮಾಪೂರ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1076

ಉತ್ತರಿಸಬೇಕಾದ ದಿನಾಂಕ : 29.09.2020

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಒಟ್ಟು ವಿವಿಧ ದರ್ಜೆಯ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಟ್ಟು 44571 ವಿವಿಧ ದರ್ಜೆಯ ಸಹಕಾರ ಸಂಘಗಳು ಇರುತ್ತವೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ ದಲ್ಲಿ ನೀಡಲಾಗಿದೆ. |
| (ಆ) | ಅವುಗಳಲ್ಲಿ ಚಾಲನೆಯಲ್ಲಿರುವ ಮತ್ತು ನಿಷ್ಕ್ರಿಯಗೊಂಡಿರುವ ಸಂಘಗಳ ಸಂಖ್ಯೆ ಎಷ್ಟು; | ಅವುಗಳಲ್ಲಿ 38503 ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು, 3306 ಸಹಕಾರ ಸಂಘಗಳು ನಿಷ್ಕ್ರಿಯಗೊಂಡಿರುತ್ತವೆ. |
| (ಇ) | ಸಹಕಾರ ಸಂಘಗಳ ಧ್ಯೇಯೋದ್ದೇಶ ಮತ್ತು ನೀತಿ ನಿಯಮಗಳಡಿಯಲ್ಲಿ ಕ್ರಿಯಾಶೀಲವಾಗಿರುವ ಸಂಘಗಳಿಗೆ ಸರ್ಕಾರದ ಪ್ರೋತ್ಸಾಹಕ ಯೋಜನೆಗಳೇನು; ಸಹಕಾರ ಸಂಘಗಳ ಅಭಿವೃದ್ಧಿಗಾಗಿ ನೂತನ ಕ್ರಿಯಾ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು? | ಸಹಕಾರ ಇಲಾಖೆಯಿಂದ ಅನುಷ್ಠಾನಗೊಳಿಸುವ ಯೋಜನೆಗಳು ಸಾಮಾನ್ಯವಾಗಿ ಸಹಕಾರ ಸಂಘಗಳ ಸದಸ್ಯರಿಗೆ ಪ್ರಯೋಜನವಾಗುವ ನಿಟ್ಟಿನಲ್ಲಿ ರೂಪಿಸಲಾಗಿದೆ ಆದರೆ ನೇರವಾಗಿ ಸಹಕಾರ ಸಂಘಗಳ ಪ್ರಯೋಜನಕ್ಕಾಗಿ ರೂಪಿಸಿರುವ ಹಾಗೂ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಈ ಕೆಳಕಂಡಂತಿದೆ.<br>**1. ಲ್ಯಾಂಪ್ಸ್ ಮಹಾ ಮಂಡಳಕ್ಕೆ ಮಾರುಕಟ್ಟೆ ಮೂಲ ಸೌಕರ್ಯಗಳ ಸ್ಥಾಪನೆಗೆ ಅನುದಾನ ಮಂಜೂರು ಮಾಡುವ ಯೋಜನೆ**<br>ಲ್ಯಾಂಪ್ಸ್ ಸಹಕಾರ ಮಹಾಮಂಡಳ ಹಾಗೂ ಲ್ಯಾಂಪ್ಸ್ ಸಂಘಗಳಿಗೆ ಮೂಲಭೂತ ಸೌಕರ್ಯಗಳಾದ ಸ್ವಂತ ಕಟ್ಟಡ, ಸಂಸ್ಕರಣಾ ಘಟಕ ಮುಂತಾದ ಮೂಲಭೂತ ಸೌಕರ್ಯ ಒದಗಿಸುತ್ತಿದ್ದು, ಲ್ಯಾಂಪ್ಸ್ ಸಹಕಾರ ಸಂಘಗಳ ಸದಸ್ಯರು ಸಂಗ್ರಹಿಸಿದ ಕಿರು ಅರಣ್ಯ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಸೌಲಭ್ಯ ದೊರಕಿ ಅವರು ಆರ್ಥಿಕವಾಗಿ ಲಾಭ ಪಡೆಯಲು ಅನುಕೂಲವಾಗುತ್ತದೆ.<br>**2. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ/ ಅಲ್ಪಸಂಖ್ಯಾತ ವರ್ಗದ ಸಹಕಾರಿ ಸಂಘಗಳಿಗೆ ಹಣಕಾಸು ಸಹಾಯ ಮಂಜೂರು ಮಾಡುವ ಯೋಜನೆ**<br>ಈ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ ಹಿಂದುಳಿದ ವರ್ಗ /ಅಲ್ಪಸಂಖ್ಯಾತರ ಸಹಕಾರಿ ಸಂಘಗಳಿಗೆ ಮೂಲಭೂತ ಸೌಕರ್ಯ ಹೊಂದಲು/ಆಸ್ತಿ ನಿರ್ಮಾಣ ಮಾಡಿಕೊಳ್ಳಲು ಸಹಾಯಧನ ನೀಡಲಾಗುವುದು. ಇದರಿಂದಾಗಿ ಸಂಘಗಳ ವ್ಯವಹಾರ ಹೆಚ್ಚಿ, ಅವುಗಳ ಉದ್ದೇಶಗಳು ಈಡೇರಲು ಸಾಧ್ಯವಾಗುತ್ತದೆ.<br>**3. ಕಾಯಕ ಯೋಜನೆಯಡಿ ಸ್ವ-ಸಹಾಯ ಗುಂಪುಗಳಿಗೆ ಬಡ್ಡಿ ಸಹಾಯಧನ**<br>ಸ್ವ-ಸಹಾಯ ಗುಂಪುಗಳ ಸದಸ್ಯರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಯನ್ನು ವೃದ್ಧಿಗೊಳಿಸುವುದರ ಮೂಲಕ ಸ್ವಉದ್ಯೋಗವನ್ನು ಪ್ರೋತ್ಸಾಹಿಸಿ ಆದಾಯವನ್ನು ವೃದ್ಧಿಸುವ ನಿಟ್ಟಿನಲ್ಲಿ "ಕಾಯಕ" ಯೋಜನೆಯಡಿ ಸ್ವ-ಸಹಾಯ ಗುಂಪುಗಳಿಗೆ ರೂ.5.00 ಲಕ್ಷದವರೆಗೆ ಶೂನ್ಯ ಬಡ್ಡಿ ದರದಲ್ಲಿ ಮತ್ತು ರೂ.5 ಲಕ್ಷದಿಂದ ರೂ. 10 ಲಕ್ಷದವರೆಗೆ ಶೇ.4 ರ ಬಡ್ಡಿದರದಲ್ಲಿ ಸಾಲ ನೀಡುವ ಯೋಜನೆಯನ್ನು ಇಲಾಖೆಯು ಅನುಷ್ಠಾನಗೊಳಿಸುತ್ತಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಪ್ರಸಕ್ತ ಸಾಲಿನಲ್ಲಿ ಸಹಕಾರ ಸಂಘಗಳ ಅಭಿವೃದ್ಧಿಗಾಗಿ ನೂತನ ಯೋಜನೆಗಳನ್ನು ರಾಜ್ಯ ಸರ್ಕಾರದ ವತಿಯಿಂದ ರೂಪಿಸಿರುವುದಿಲ್ಲ. ಆದರೆ ಕೇಂದ್ರ ಸರ್ಕಾರದ "ಆತ್ಮನಿರ್ಭರ ಯೋಜನೆ"ಯಿಂದ |
| | | ಅಗ್ರಿಇನ್ಫ್ರಾಫಂಡ್ ಅಡಿಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು "Multi Service Center" ಗಳನ್ನಾಗಿ ಮಾಡಲು ರೂ.2 ಕೋಟಿಗಳವರೆಗೆ ನಬಾರ್ಡ್ ಮೂಲಕ ಶೇ.4. ರ ಬಡ್ಡಿದರದಲ್ಲಿ ಸಾಲ ಸೌಲಭ್ಯದೊರೆಯಲಿದೆ. ಈ ಯೋಜನೆಯಡಿ 1549 ಸಹಕಾರ ಸಂಘಗಳು ಯೋಜನೆ ಲಾಭ ಪಡೆಯಲಿದ್ದು, ಇದುವರೆಗೆ 265 ಸಹಕಾರ ಸಂಘಗಳ ಪ್ರಸ್ತಾವೆಗಳನ್ನು ಅಪೆಕ್ಸ್ ಬ್ಯಾಂಕ್ ಮೂಲಕ ನಬಾರ್ಡ್‌ಗೆ ಸಲ್ಲಿಸಲಾಗಿದೆ.<br><br>ಈ ವರ್ಷದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ(ಆರ್‌ಕೆವಿವೈ)ಯಡಿ ಕೃಷಿ ಇಲಾಖೆಯಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಸಂಸ್ಕರಣೆ ಮತ್ತು ಆಹಾರದಾನ್ಯ ಸಂಗ್ರಹ ಮಾಡಲು 9 ಸಹಕಾರ ಸಂಘಗಳಿಗೆ ರೂ.6.97 ಕೋಟಿ ಸಹಾಯಧನವನ್ನು ಒದಗಿಸಲು ಯೋಜನೆ ರೂಪಿಸಿದ್ದು ಮೊದಲ ಕಂತಿನಲ್ಲಿ 2 ಸಂಘಗಳಿಗೆ ರೂ.1.50 ಕೋಟಿ ಸಹಾಯಧನ ಬಿಡುಗಡೆ ಮಾಡಲಾಗಿದೆ. |

**ಸಂಖ್ಯೆ: ಸಿಒ 358 ಸಿಎಲ್‌ಎಸ್ 2020**

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು

ಮಾನ್ಯ ವಿಧಾನ ಪರಿಷತ್ತಿ ಸದಸ್ಯರಾದ ಶ್ರೀ ಆರ್.ಬಿ. ತಿಮ್ಮಾಪೂರ(ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಪ್ರಶ್ನೆ ಸಂಖ್ಯೆ:1076 ಕ್ಕೆ ಸಂಬಂಧಿಸಿದಂತೆ ಮಾಹಿತಿ ಸಲ್ಲಿಸುವ ಬಗ್ಗೆ.

**ವಿಷಯ: ರಾಜ್ಯದಲ್ಲಿರುವ ವಿವಿಧ ಸಹಕಾರ ಸಂಘಗಳ ಕುರಿತು.**

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಒಟ್ಟು ವಿವಿಧ ದರ್ಜೆಯ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಟ್ಟು 44571 ವಿವಿಧ ದರ್ಜೆಯ ಸಹಕಾರ ಸಂಘಗಳು ಇರುತ್ತವೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ ರಲ್ಲಿ ಲಗತ್ತಿಸಿದೆ. |
| (ಆ) | ಅವುಗಳಲ್ಲಿ ಚಾಲನೆಯಲ್ಲಿರುವ ಮತ್ತು ನಿಷ್ಕ್ರಿಯಗೊಂಡಿರುವ ಸಂಘಗಳ ಸಂಖ್ಯೆ ಎಷ್ಟು; | ಅವುಗಳಲ್ಲಿ 38503 ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು ಮತ್ತು 3306 ಸಹಕಾರ ಸಂಘಗಳು ನಿಷ್ಕ್ರಿಯಗೊಂಡಿರುತ್ತವೆ. |
| (ಇ) | ಸಹಕಾರ ಸಂಘಗಳ ಧ್ಯೇಯೋದ್ದೇಶ ಮತ್ತು ನೀತಿ ನಿಯಮಗಳಡಿಯಲ್ಲಿ ಕ್ರಿಯಾಶೀಲವಾಗಿರುವ ಸಂಘಗಳಿಗೆ ಸರ್ಕಾರದ ಪ್ರೋತ್ಸಾಹಕ ಯೋಜನೆಗಳೇನು; ಸಹಕಾರ ಸಂಘಗಳ ಅಭಿವೃದ್ಧಿಗಾಗಿ ನೂತನ ಕ್ರಿಯಾ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು? | ಸಹಕಾರ ಇಲಾಖೆಯಿಂದ ಅನುಷ್ಠಾನಗೊಳಿಸುವ ಯೋಜನೆಗಳು ಸಾಮಾನ್ಯವಾಗಿ ಸಹಕಾರ ಸಂಘಗಳ ಸದಸ್ಯರಿಗೆ ಪ್ರಯೋಜನವಾಗುವ ನಿಟ್ಟಿನಲ್ಲಿ ರೂಪಿಸಲಾಗಿದೆ ಆದರೆ ನೇರವಾಗಿ ಸಹಕಾರ ಸಂಘಗಳ ಪ್ರಯೋಜನಕ್ಕಾಗಿ ರೂಪಿಸಿರುವ ಹಾಗೂ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಈ ಕೆಳಕಂಡಂತಿದೆ.<br><br>1. **ಲ್ಯಾಂಪ್ಸ್ ಮಹಾ ಮಂಡಳಕ್ಕೆ ಮಾರುಕಟ್ಟೆ ಮೂಲ ಸೌಕರ್ಯಗಳ ಸ್ಥಾಪನೆಗೆ ಅನುದಾನ ಮಂಜೂರು ಮಾಡುವ ಯೋಜನೆ**<br>–ಲ್ಯಾಂಪ್ಸ್ ಸಹಕಾರ ಮಹಾಮಂಡಳ ಹಾಗೂ ಲ್ಯಾಂಪ್ಸ್ ಸಂಘಗಳಿಗೆ ಮೂಲಭೂತ ಸೌಕರ್ಯಗಳಾದ ಸ್ವಂತ ಕಟ್ಟಡ, ಸಂಸ್ಕರಣಾ ಘಟಕ, ಕಂಪ್ಯೂಟರ್‌ಗಳು, ಫ್ಯಾಕ್ಸ್, ಟೆಲಿಫೋನ್‌ಗಳನ್ನು ಒದಗಿಸುವುದು ಈ ಯೋಜನೆಯ ಉದ್ದೇಶವಾಗಿದ್ದು, ಮೂಲಭೂತ ಸೌಕರ್ಯ ಒದಗಿಸುವುದರಿಂದ ಲ್ಯಾಂಪ್ಸ್ ಸಹಕಾರ ಸಂಘಗಳ ಸದಸ್ಯರು ಸಂಗ್ರಹಿಸಿದ ಕಿರು ಅರಣ್ಯ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಸೌಲಭ್ಯ ದೊರಕಿ ಅವರು ಆರ್ಥಿಕವಾಗಿ ಲಾಭ ಪಡೆಯುಲು ಅನುಕೂಲವಾಗುತ್ತದೆ.<br><br>2. **ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ/ ಅಲ್ಪಸಂಖ್ಯಾತ ವರ್ಗದ ಸಹಕಾರಿ ಸಂಘಗಳಿಗೆ ಹಣಕಾಸು ಸಹಾಯ ಮಂಜೂರು ಮಾಡುವ ಯೋಜನೆ**<br><br>–ಈ ಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಹಿಂದುಳಿದ ವರ್ಗ / ಅಲ್ಪಸಂಖ್ಯಾತರ ಸಹಕಾರಿ ಸಂಘಗಳಿಗೆ ಮೂಲಭೂತ ಸೌಕರ್ಯ ಹೊಂದಲು/ಆಸ್ತಿ ನಿರ್ಮಾಣ ಮಾಡಿಕೊಳ್ಳಲು ಸಹಾಯಧನ ನೀಡಲಾಗುವುದು. ಫಲಾನುಭವಿ ಸಹಕಾರ ಸಂಘಗಳಲ್ಲಿ ಮೂಲಭೂತ ಸೌಕರ್ಯ / ಆಸ್ತಿ ನಿರ್ಮಾಣವಾಗುವುದರಿಂದ ಸಂಘಗಳ ವ್ಯವಹಾರ ಹೆಚ್ಚಿ, ಅವುಗಳ ಉದ್ದೇಶಗಳು ಈಡೇರಲು ಸಾಧ್ಯವಾಗುತ್ತದೆ.<br><br>3. **ಕಾಯಕ ಯೋಜನೆಯಡಿ ಸ್ವ-ಸಹಾಯ ಗುಂಪುಗಳಿಗೆ ಬಡ್ಡಿ ಸಹಾಯಧನ**<br>– ಸ್ವ-ಸಹಾಯ ಗುಂಪುಗಳ ಸದಸ್ಯರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಯನ್ನು ವೃದ್ಧಿಗೊಳಿಸುವುದರ ಮೂಲಕ |

(6)

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಸ್ವ –ಉದ್ಯೋಗವನ್ನು ಪ್ರೋತ್ಸಾಹಿಸಿ ಆದಾಯವನ್ನು ವೃದ್ಧಿಸುವ ನಿಟ್ಟಿನಲ್ಲಿ "ಕಾಯಕ" ಯೋಜನೆಯಡಿ ಸ್ವ-ಸಹಾಯ ಗುಂಪುಗಳಿಗೆ ರೂ.5 ಲಕ್ಷದವರೆಗೆ ಶೂನ್ಯ ಬಡ್ಡಿ ದರದಲ್ಲಿ ಮತ್ತು ರೂ.5 ಲಕ್ಷದಿಂದ ರೂ. 10 ಲಕ್ಷದವರೆಗೆ ಶೇ.4 ರ ಬಡ್ಡಿದರದಲ್ಲಿ ಸಾಲ ನೀಡುವ ಯೋಜನೆಯನ್ನು ಇಲಾಖೆಯು ಅನುಷ್ಠಾನಗೊಳಿಸುತ್ತಿದೆ.<br><br>ಪ್ರಸಕ್ತ ಸಾಲಿನಲ್ಲಿ ಸಹಕಾರ ಸಂಘಗಳ ಅಭಿವೃದ್ಧಿಗಾಗಿ ನೂತನ ಯೋಜನೆಗಳನ್ನು ರಾಜ್ಯ ಸರ್ಕಾರದ ವತಿಯಿಂದ ರೂಪಿಸಿರುವುದಿಲ್ಲ. ಆದರೆ ಕೇಂದ್ರ ಸರ್ಕಾರದ "ಆತ್ಮನಿರ್ಭರ ಯೋಜನೆ"ಯಿಂದ ಅಗ್ರಿಇನ್ಫ್ರಾಫಂಡ್ ಅಡಿಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು "Multi Service Center" ಗಳನ್ನಾಗಿ ಮಾಡಲು ರೂ.2 ಕೋಟಿಗಳವರೆಗೆ ನಬಾರ್ಡ್ ಮೂಲಕ ಶೇ.4. ರ ಬಡ್ಡಿದರದಲ್ಲಿ ಸಾಲ ಸೌಲಭ್ಯದೊರೆಯಲಿದೆ. ಈ ಯೋಜನೆಯಡಿ 1549 ಸಹಕಾರ ಸಂಘಗಳು ಯೋಜನೆ ಲಾಭ ಪಡೆಯಲಿದ್ದು, ಇದುವರೆಗೆ 265 ಸಹಕಾರ ಸಂಘಗಳ ಪ್ರಸ್ತಾವೆಗಳನ್ನು ಅಪೆಕ್ಸ್ ಬ್ಯಾಂಕ್ ಮೂಲಕ ನಬಾರ್ಡ್‌ಗೆ ಸಲ್ಲಿಸಲಾಗಿದೆ.<br><br>ಈ ವರ್ಷದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ(ಆರ್‌ಕೆವಿವೈ)ಯಡಿ ಕೃಷಿ ಇಲಾಖೆಯಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಸಂಸ್ಕರಣೆ ಮತ್ತು ಆಹಾರದಾನ್ಯ ಸಂಗ್ರಹ ಮಾಡಲು 9 ಸಹಕಾರ ಸಂಘಗಳಿಗೆ ರೂ.6.97 ಕೋಟಿ ಸಹಾಯಧನವನ್ನು ಒದಗಿಸಲು ಯೋಜನೆ ರೂಪಿಸಿದ್ದು ಮೊದಲ ಕಂತಿನಲ್ಲಿ 2 ಸಂಘಗಳಿಗೆ ರೂ.1.50 ಕೋಟಿ ಸಹಾಯಧನ ಬಿಡುಗಡೆ ಮಾಡಲಾಗಿದೆ. |

ಸಹಕಾರ ಸಂಘಗಳ ನಿಬಂಧಕರು,
ಕರ್ನಾಟಕ ರಾಜ್ಯ, ಬೆಂಗಳೂರು.

# ಅನುಬಂಧ

| ಕ್ರ. ಸಂ | ಜಿಲ್ಲೆಯ ಹೆಸರು | ಸಹಕಾರ ಸಂಘಗಳ ಸಂಖ್ಯೆ |
|---|---|---|
| 1 | ಬೆಂಗಳೂರು ನಗರ | 2712 |
| 2 | ಬೆಂಗಳೂರು ಗ್ರಾಮಾಂತರ | 1112 |
| 3 | ರಾಮನಗರ | 1294 |
| 4 | ತುಮಕೂರು | 2248 |
| 5 | ಚಿತ್ರದುರ್ಗ | 1017 |
| 6 | ಕೋಲಾರ | 1574 |
| 7 | ಚಿಕ್ಕಬಳ್ಳಾಪುರ | 1549 |
| 8 | ಶಿವಮೊಗ್ಗ | 1244 |
| 9 | ದಾವಣಗೆರೆ | 1402 |
| 10 | ಮೈಸೂರು | 2442 |
| 11 | ಮಂಡ್ಯ | 2147 |
| 12 | ಹಾಸನ | 1930 |
| 13 | ಕೊಡುಗು | 337 |
| 14 | ಮಂಗಳೂರು | 858 |
| 15 | ಚಿಕ್ಕಮಗಳೂರು | 598 |
| 16 | ಚಾಮರಾಜನಗರ | 821 |
| 17 | ಉಡುಪಿ | 669 |
| 18 | ಬೆಳಗಾಂ | 5760 |
| 19 | ಬಿಜಾಪುರ | 1505 |
| 20 | ಧಾರವಾಡ | 1053 |
| 21 | ಕಾರವಾರ | 916 |
| 22 | ಹಾವೇರಿ | 1247 |
| 23 | ಗದಗ | 996 |
| 24 | ಬಾಗಲಕೋಟೆ | 1906 |
| 25 | ಗುಲ್ಬರ್ಗಾ | 1571 |
| 26 | ರಾಯಚೂರು | 1264 |
| 27 | ಬೀದರ್ | 1275 |
| 28 | ಬಳ್ಳಾರಿ | 1512 |
| 29 | ಕೊಪ್ಪಳ | 789 |
| 30 | ಯಾದಗಿರಿ | 823 |
| ಒಟ್ಟು | | **44571** |

**Assistant Director (Statistics)**
(Research and Evaluation Section)
Office of the Registrar of Co-operative Societies
No. 1, Ali Askar Road, Bengaluru - 560 052